# ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಸಿ.ಟಿ ರವಿ ರವರು ನಿಯಮ 72 ರಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ

**ಪ್ರಶ್ನೆ:** ಹಳೇ ಹುಬ್ಬಳ್ಳಿ ಪೊಲೀಸ್ ಠಾಣೆ ಹಾಗೂ ವಾಹನಗಳಿಗೆ ಕಲ್ಲು ತೂರಿ, ಬೆಂಕಿ ಹಾಕಿ, ಸಾರ್ವಜನಿಕ ಆಸ್ತಿಗಳಿಗೆ ಹಾನಿಯುಂಟು ಮಾಡಿ ಅಟ್ಟಹಾಸ ಮೆರೆದಿದ್ದ ಧಾರ್ಮಿಕ ಮತಾಂಧರ ಮೇಲೆ ದಾಖಲಾಗಿದ್ದ ಪ್ರಕರಣವನ್ನು ಹಿಂಪಡೆಯಲು ಸರ್ಕಾರ ನಿರ್ಧರಿಸಿದೆ. ಸಾರ್ವಜನಿಕ ಆಸ್ತಿ-ಪಾಸ್ತಿಗಳಿಗೆ ನಷ್ಟ ಮಾಡಿ, ಶಾಂತಿ ಸುವ್ಯವಸ್ಥೆ ಕಾಪಾಡುವ ಪೊಲೀಸರ ಮೇಲೆಯೇ ಹಲ್ಲೆ ಮಾಡಿದ್ದ ಧರ್ಮಾಂದ ಪುಂಡರ ಮೇಲಿನ ಕೇಸ್‌ಗಳನ್ನು ಹಿಂದಕ್ಕೆ ಪಡೆಯುವ ಮೂಲಕ ಸರ್ಕಾರ ಮತ್ತೆ ಗಲಭೆಗೆ ಪ್ರಚೋದನೆ ನೀಡಿದಂತಾಗಿದೆ. ಯು.ಎ.ಪಿ.ಎ. (ಸಾರ್ವಜನಿಕ ಆಸ್ತಿ ಹಾನಿ ತಡೆ) ಕಾಯ್ದೆ ಸೇರಿದಂತೆ ಗಂಭೀರ ಅಪರಾಧಗಳಿದ್ದರೂ ಅವರನ್ನು ನಿರಪರಾಧಿಗಳು ಎಂದು ಘೋಷಿಸುವ ಸರ್ಕಾರದ ಈ ನಡೆ ಕಾನೂನು ವಿರೋಧಿ. ಈ ಹಿಂದೆಯೂ ಸರ್ಕಾರ ಪಿ.ಎಫ್.ಐ ಮತ್ತು ಎಸ್.ಡಿ.ಪಿ.ಐ. ಸಂಘಟನೆಗಳ ಮೇಲಿನ ಪ್ರಕರಣವನ್ನು ಹಿಂಪಡೆದಿದ್ದರ ಪರಿಣಾಮ ಅವರು ಮತ್ತೆ ಸಮಾಜಘಾತುಕ ಚಟುವಟಿಕೆಗಳಲ್ಲಿ ಭಾಗಿಯಾಗಿರುವ ಉದಾಹರಣೆ ರಾಜ್ಯದಲ್ಲಿದೆ. ರಾಜ್ಯ ಸರ್ಕಾರ ಅಲ್ಪಸಂಖ್ಯಾತರ ಓಲೈಕೆಗಾಗಿ ಮತಾಂಧ ಕಿಡಿಗೇಡಿಗಳ ಮೇಲಿನ ಪ್ರಕರಣವನ್ನು ಹಿಂದಕ್ಕೆ ಪಡೆಯುವ ನಿರ್ಧಾರವನ್ನು ಕೈಬಿಡುವ ಕುರಿತು.

**ಉತ್ತರ:**

ಪ್ರಕರಣಗಳನ್ನು ಅಭಿಯೋಜನೆಯಿಂದ ಹಿಂಪಡೆಯಲು ಸ್ವೀಕೃತವಾಗುವ ಮನವಿಗಳಿಗೆ ಮಹಾನಿರ್ದೇಶಕರು ಮತ್ತು ಆರಕ್ಷಕ ಮಹಾನಿರೀಕ್ಷಕರು ಮತ್ತು ನಿರ್ದೇಶಕರು, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ ಇವರ ಅಭಿಪ್ರಾಯ ಪಡೆಯಲಾಗುತ್ತದೆ. ನಂತರ, ಕಾನೂನು ಇಲಾಖೆಯಿಂದಲೂ ಅಭಿಪ್ರಾಯ ಪಡೆದು, ಸರ್ಕಾರವು ಕ್ರಿಮಿನಲ್ ಮೊಕದ್ದಮೆಗಳನ್ನು ಅಭಿಯೋಜನೆಯಿಂದ ಹಿಂಪಡೆಯುವ ಕುರಿತು ಪರಿಶೀಲಿಸಲು ರಚಿಸಿರುವ ಸಚಿವ ಸಂಪುಟದ ಉಪ ಸಮಿತಿಯ ಮುಂದೆ ಪರಿಶೀಲನೆಗೆ ಮಂಡಿಸಲಾಗುತ್ತದೆ. ಸಚಿವ ಸಂಪುಟದ ಉಪ ಸಮಿತಿಯು ಸಿಆರ್‌ಪಿಸಿ ಕಲಂ 321 ಅಡಿಯಲ್ಲಿ ಅಭಿಯೋಜನೆಯಿಂದ ಹಿಂಪಡೆಯಲು ಸೂಕ್ತವೆಂದು ಶಿಫಾರಸ್ಸು ಮಾಡಿದ ಪ್ರಕರಣಗಳನ್ನು ಸಚಿವ ಸಂಪುಟದ ನಿರ್ಣಯಕ್ಕಾಗಿ ಮಂಡಿಸಲಾಗುತ್ತದೆ. ಸಚಿವ ಸಂಪುಟದಲ್ಲಿ ಅಭಿಯೋಜನೆಯಿಂದ ಹಿಂಪಡೆಯಲು ಸೂಕ್ತವೆಂದು ಅನುಮೋದನೆ ನೀಡಿದ ಪ್ರಕರಣಗಳನ್ನು ಮಾತ್ರ ಅಭಿಯೋಜನೆಯಿಂದ ಹಿಂಪಡೆಯಲು ಮಾನ್ಯ ನ್ಯಾಯಾಲಯಗಳಲ್ಲಿ ಅಗತ್ಯ ಅರ್ಜಿ ಸಲ್ಲಿಸಲು ಸರ್ಕಾರದ ಅನುಮೋದನೆ ನೀಡಿ ಆದೇಶ ಹೊರಡಿಸಲಾಗುತ್ತದೆ.

ಈ ರೀತಿ ಹೊರಡಿಸಲಾಗುವ ಆದೇಶಗಳು ಮಾನ್ಯ ಸರ್ವೋಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:699/2016 ಅಶ್ವಿನಿ ಕುಮಾರ್ ಉಪಾಧ್ಯಾಯ Vs ಕೇಂದ್ರ ಸರ್ಕಾರ ಹಾಗೂ ಇತರರು ಅರ್ಜಿಯಲ್ಲಿ ದಿನಾಂಕ:10.08.2021ರಲ್ಲಿ ನೀಡಿರುವ ಆದೇಶ ಹಾಗೂ ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:12755/2020 ರ IA 1/2022ರ ಮಧ್ಯಂತರ ಅರ್ಜಿಯಲ್ಲಿನ ದಿನಾಂಕ:13.07.2022ರ ಆದೇಶಗಳಲ್ಲಿ ಜನಪ್ರತಿನಿಧಿಗಳ ವಿರುದ್ಧದ ಪ್ರಕರಣಗಳನ್ನು ಅಭಿಯೋಜನೆಯಿಂದ ಹಿಂಪಡೆಯಲು ಮಾನ್ಯ ಉಚ್ಚ ನ್ಯಾಯಾಲಯವು ನೀಡುವ ನಿರ್ದೇಶನಗಳನ್ನು ಪಾಲಿಸುವ ಷರತ್ತಿಗೊಳಪಟ್ಟಿರುತ್ತದೆ.

ಹಳೇ ಹುಬ್ಬಳ್ಳಿ ಪೊಲೀಸ್ ಠಾಣೆ ಮೊ.ಸಂ.63/2022 ರ ಪ್ರಕರಣವನ್ನು ಸಚಿವ ಸಂಪುಟ ಉಪ ಸಮಿತಿಯ ಪರಿಶೀಲನೆಗೆ ಮಂಡಿಸಿ, ಉಪ ಸಮಿತಿಯ ತೀರ್ಮಾನದನ್ವಯ, ಸಚಿವ ಸಂಪುಟದ ನಿರ್ಣಯಕ್ಕೆ ಮಂಡಿಸಲಾಗಿದ್ದು, ಹಳೇ ಹುಬ್ಬಳ್ಳಿ ಪೊಲೀಸ್ ಠಾಣೆ ಮೊ.ಸಂ.63/2022 ರ ಪ್ರಕರಣವನ್ನು ಅಭಿಯೋಜನೆಯಿಂದ ಹಿಂಪಡೆಯಲು ಸಚಿವ ಸಂಪುಟವು ಅನುಮೋದನೆಯನ್ನು ನೀಡಿರುವಂತೆ, ಸರ್ಕಾರದ ಆದೇಶ ಸಂಖ್ಯೆ:ಹೆಚ್‌ಡಿ 129 ಎಮ್‌ಹೆಚ್‌ಬಿ 2024, ದಿನಾಂಕ: 15.10.2024ರ ಆದೇಶದಲ್ಲಿ ಸಿಆರ್‌ಪಿಸಿ ಕಲಂ 321 ರೀತ್ಯಾ ಅಭಿಯೋಜನೆಯಿಂದ ಹಿಂಪಡೆಯಲು ಅನುಮೋದನೆಯನ್ನು ನೀಡಲಾಗಿದ್ದು, ನ್ಯಾಯಾಲಯದಿಂದ ಹಿಂಪಡೆಯಲು ಅಗತ್ಯವಾದ ಅರ್ಜಿಯನ್ನು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಲು ನಿಯಮಾನುಸಾರ ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚಿಸಿ ಆದೇಶಿಲಾಗಿರುತ್ತದೆ. ಕ್ರಿಮಿನಲ್ ಮೊಕದ್ದಮೆಗಳನ್ನು ಹಿಂಪಡೆಯುವ ಪ್ರಕ್ರಿಯೆಯಲ್ಲಿ ಸಕ್ಷಮ ನ್ಯಾಯಾಲಯವು ನೀಡುವ ಅಂತಿಮ ಆದೇಶ/ನಿರ್ದೇಶನಗಳನ್ನು ಪಾಲಿಸಲಾಗುವುದು.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಉಬೇರಲ್ಲಾ ಆಫ್ ಅಂಜುಮನ್- ಇ – ಇಸ್ಲಾಂ ಹುಬ್ಬಳ್ಳಿಯ ಸಂಘಟನೆಯ ಸದಸ್ಯರುಗಳು ಪ್ರಕರಣವನ್ನು ಹಿಂಪಡೆಯುವ ಕುರಿತು ಮಾನ್ಯ ಗೃಹ ಸಚಿವರಿಗೆ ಹಾಗೂ ಮಾನ್ಯ ಉಪ ಮುಖ್ಯಮಂತ್ರಿರವರಿಗೆ ಮನವಿಯನ್ನು ಸಲ್ಲಿಸಿರುತ್ತಾರೆ. ಸದರಿ ಮನವಿಗೆ ಸಂಬಂಧಿಸಿದಂತೆ ಡಿಜಿ & ಐಜಿಪಿ ಹಾಗೂ ಕಾನೂನು ಇಲಾಖೆಯ ಅಭಿಪ್ರಾಯವನ್ನು ಪಡೆಯಲಾಗಿರುತ್ತದೆ. ಈ ಪ್ರಕರಣವನ್ನು ಅಭಿಯೋಜನೆಯಿಂದ ಹಿಂಪಡೆಯಲು ಸಚಿವ ಸಂಪುಟದ ಉಪ ಸಮಿತಿಯ ನಿರ್ಣಯಕ್ಕೆ ದಿನಾಂಕ05.09.2024 ರಂದು ಮಂಡಿಸಲಾಗಿದ್ದು, ಮೊಕದ್ದಮೆಯನ್ನು ಹಿಂಪಡೆಯಲು ಸೂಕ್ತವೆಂದು ತೀರ್ಮಾನಿಸಿ, ಸಚಿವ ಸಂಪುಟದ ನಿರ್ಣಯಕ್ಕೆ ಮಂಡಿಸಲಾಗಿರುತ್ತದೆ. ಸಚಿವ ಸಂಪುಟದ ಶಿಫಾರಸ್ಸಿನಂತೆ ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ 129 ಎಂಹೆಚ್‌ಬಿ 2024, ದಿನಾಂಕ:15.10.2024ರಲ್ಲಿ ಈ ಮೊಕದ್ದಮೆಯನ್ನು ಹಿಂಪಡೆಯಲು ನಿಯಮಾನುಸಾರ ಸೂಕ್ತ ಅರ್ಜಿಯನ್ನು ಮಾನ್ಯ ನ್ಯಾಯಲಾಯಕ್ಕೆ ಸಲ್ಲಿಸುವಂತೆ ನಿರ್ದೇಶಕರು, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಗೆ ಸೂಚಿಸಿ ಆದೇಶಿಸಲಾಗಿರುತ್ತದೆ.

ಸಂಖ್ಯೆ:ಹೆಚ್‌ಡಿ 11 ಎಸ್‌ಡಿಎನ್ 2025

(ಡಾ:ಜಿ.ಪರಮೇಶ್ವರ)
ಗೃಹ ಸಚಿವರು